## **ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕೆ.ಆರ್ ನಗರ**

**ಸಿಸಿ ನಂ. 47/2024**

**ಪಿರ್ಯಾದುದಾರರುಃ** ಶ್ರೀ ವಿ.ಆರ್.ಪವನ್ ಬಿನ್ ರಾಜೇಗೌಡ,

--**ವಿರುದ್ಧ** –

**ಆರೋಪಿಃ** ಶ್ರೀ ಸಯ್ಯದ್ ಜಮೀರ್ ಪಾಷ ಬಿನ್ ಮುನಾವರ್ ಪಾಷ,

**ಆಪಾದನೆ**

ಆರೋಪಿಯಾದ ನೀವು ಪಿರ್ಯಾದುದಾರರಿಗೆ ಕಾನೂನುಬದ್ಧವಾಗಿ ಪಾವತಿ ಮಾಡಬೇಕಾದ ರೂ.4,50,000/- ಮರುಪಾವತಿಗಾಗಿ **ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕೆ ಆರ್ ನಗರ ಶಾಖೆ**, ಚೆಕ್ ನಂಃ 325900 ದಿನಾಂಕಃ 10.10.2023 ರೂ.4,50,000/- ಎಂದು ನಮೂದಿಸಿ ಚೆಕ್ಕನ್ನು ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯನ್ನು ಹೊಂದಿರುವ **ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕೆ ಆರ್ ನಗರ ಶಾಖೆ**, ಇಲ್ಲಿ ನಗದೀಕರಿಸಲು ಹಾಜರುಪಡಿಸಿದಾಗ, ಸದರಿಯವರು ನಿಮ್ಮ ಖಾತೆಯಲ್ಲಿ **"ಸಾಕಷ್ಟು ಹಣವಿಲ್ಲ"** ಎಂಬ ಹಿಂಬರಹಗಳೊಂದಿಗೆ ಚೆಕ್ಕು ಅಮಾನ್ಯಗೊಂಡಿದ್ದು, ಆ ಬಗ್ಗೆ ಸದರಿ ಬ್ಯಾಂಕಿನವರು ದಿನಾಂಕ: 10.10.2023 ಮತ್ತು 03.01.2024 ರಂದು ಹಿಂಬರಹವನ್ನು ನೀಡಿದ್ದು, ನಂತರ ಫಿರ್ಯಾದಿದಾರರು ತಮ್ಮ ವಕೀಲರ ಮುಖಾಂತರ ಬರವಣಿಗೆ ರೂಪದಲ್ಲಿ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದರೂ ಸಹ ಚೆಕ್ಕಿನಲ್ಲಿರುವ ಹಣವನ್ನು ಮರುಪಾವತಿ ಮಾಡಿರುವುದಿಲ್ಲ, ಆ ಕಾರಣ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧ ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿದ್ದೀರೆಂದು ಆಪಾದಿಸಲಾಗಿದೆ.

ಪ್ರಶ್ನೆಃ-1 ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?
ಉತ್ತರಃ

ಪ್ರಶ್ನೆ-2 ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೇ?
ಉತ್ತರಃ

(ದಿನಾಂಕ 29.10.2025 ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ಧೃಡೀಕರಿಸಿದೆ)

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ಕೆ ಆರ್ ನಗರ.**